# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ, ತುಮಕೂರು-572 103 ☎ : 0816-2255650, 2273511 ಫ್ಯಾಕ್ಸ್ :0816-2270719

ಸಂಖ್ಯೆ:ತುವಿ: ಪ.ವಿ::ಪ.ಶುಲ್ಕ.:2019-20 : 698 ದಿನಾಂಕ: 01.01.2020

## ಅಧಿಸೂಚನೆ

ವಿಷಯ: 2020 ರ ಫೆಬ್ರವರಿ/ಮಾರ್ಚ್ ಮಾಹೆಗಳಲ್ಲಿ ನಡೆಯಲಿರುವ ವಿವಿಧ ಸ್ನಾತಕೋತ್ತರ ಪದವಿಗಳಿಗೆ ಸಂಬಂಧಿಸಿದಂತೆ 2005-06 ನೇ ಶೈಕ್ಷಣಿಕ ಸಾಲಿನಿಂದ 2015-16 ನೇ ಶೈಕ್ಷಣಿಕ ಸಾಲಿನವರೆಗೆ ಪ್ರವೇಶ ಪಡೆದು Double the Duration of the Course ಪೂರೈಸಿರುವ ಎಲ್ಲಾ ವಿದ್ಯಾರ್ಥಿಗಳಿಗೆ ಅಂತಿಮ ಅವಕಾಶವಾಗಿ ಒಂದು ಬಾರಿ ಎಲ್ಲಾ ಅರ್ಹ ಪೂರಕ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕ ಪಾವತಿಸಿಕೊಳ್ಳುವ ಕುರಿತು.

ಉಲ್ಲೇಖ: 1. ತೃತೀಯ ಸಾಮಾನ್ಯ ಸಿಂಡಿಕೇಟ್ ಸಭೆಯ ಅನುಮೋದನೆಯ ದಿನಾಂಕ: 15.10.2019
2. ಮಾನ್ಯ ಕುಲಪತಿಗಳವರ ಅನುಮೋದನೆಯ ದಿನಾಂಕ: 30.12.2019

*****

2020 ರ ಫೆಬ್ರವರಿ/ಮಾರ್ಚ್ ಮಾಹೆಗಳಲ್ಲಿ ನಡೆಯಲಿರುವ ವಿವಿಧ ಸ್ನಾತಕೋತ್ತರ ಪದವಿಗಳ I ರಿಂದ IV ನೇ ಸೆಮಿಸ್ಟರ್‌ಗಳಿಗೆ ಸಂಬಂಧಿಸಿದಂತೆ 2005-06 ನೇ ಶೈಕ್ಷಣಿಕ ಸಾಲಿನಿಂದ 2015-16 ನೇ ಶೈಕ್ಷಣಿಕ ಸಾಲಿನವರೆಗೆ ಪ್ರವೇಶ ಪಡೆದು Double the Duration of the Course ಪೂರೈಸಿರುವ ಎಲ್ಲಾ ವಿದ್ಯಾರ್ಥಿಗಳಿಗೆ ಅಂತಿಮ ಅವಕಾಶವಾಗಿ ಒಂದು ಬಾರಿ ಎಲ್ಲಾ ಅರ್ಹ ಪೂರಕ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕ ಪಾವತಿಸಿಕೊಳ್ಳುವುದು.

ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳ ಶುಲ್ಕದ ವಿವರಗಳನ್ನು ವಿಷಯದೊಂದಿಗೆ ಆನ್‌ಲೈನ್‌ನಲ್ಲಿ ಸಮೂದಿಸುವುದು

### ಗಮನಿಸಬೇಕಾದ ದಿನಾಂಕಗಳು

| | | |
|---|---|---|
| 1. | ವಿದ್ಯಾರ್ಥಿಗಳಿಗೆ ದಂಡ ರಹಿತ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 20.01.2020 |
| 2. | ವಿದ್ಯಾರ್ಥಿಗಳಿಗೆ ರೂ. 100/- ದಂಡ ಶುಲ್ಕದೊಂದಿಗೆ ಪಾವತಿಸಲು ಕೊನೆಯ ದಿನಾಂಕ | 27.01.2020 |
| 3. | ಕಾಲೇಜಿನವರು ಆನ್‌ಲೈನ್‌ನಲ್ಲಿ ಸಮೂದಿಸಲು ಕೊನೆಯ ದಿನಾಂಕ | 29.01.2020 |
| 4. | ಕಾಲೇಜಿನವರು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕೊನೆಯ ದಿನಾಂಕ | 31.01.2020 |

*** ವಿದ್ಯಾರ್ಥಿಯು ಮೂರು ಅಥವಾ ಮೂರಕ್ಕಿಂತ ಹೆಚ್ಚು ವಿಷಯಗಳಿಗೆ ಪೂರ್ಣ ಶುಲ್ಕವನ್ನು ಪಾವತಿಸಬೇಕು.

| ಕ್ರ. ಸಂ | ಕೋರ್ಸ್ | ಪರೀಕ್ಷಾ ಶುಲ್ಕ | ಪರೀಕ್ಷಾ ಶುಲ್ಕದ ವಿವರ (ಒಂದು ವಿಷಯಕ್ಕೆ) |
|---|---|---|---|
| 1. | ಎಂ.ಎ./ಎಂ.ಕಾಂ./ ಎಂ.ಕಾಂ.-ಇನ್‌ಫಾರ್‌ಮೇಷನ್ ಸಿಸ್ಟಮ್/ಎಂ.ಎಸ್ಸಿ./ಎಂ.ಎಸ್‌ಕಮ್ಯೂನಿಕೇಷನ್/ಎಂ.ಎಸ್ ಎಲೆಕ್ಟ್ರಾನಿಕ್ ಮೀಡಿಯಾ/ಎಂ.ಎಲ್.ಐ.ಸಿ | 1000-00 | ರೂ. 400-00 |
| 2. | ಎಂ.ಎಸ್.ಡಬ್ಲ್ಯೂ. | 1000-00 | ರೂ. 500-00 |
| 3. | ಎಂ.ಬಿ.ಎ/ಎಂ.ಸಿ. ಎ. | 2000-00 | ರೂ. 600-00 |
| 4. | ಎಂ.ಎಸ್ಸಿ. ಜೀವತಂತ್ರಜ್ಞಾನ/ಸೂಕ್ಷ್ಮಜೀವಶಾಸ್ತ್ರ | 2000-00 | ರೂ. 400-00 |

(....2)

ಪರೀಕ್ಷಾ ಶುಲ್ಕದಲ್ಲಿ ವಿನಾಯಿತಿ ಪಡೆದಿರುವ ಹಾಗೂ ಪುನರಾವರ್ತಿತ ವಿದ್ಯಾರ್ಥಿಗಳೂ ಸಹ ಈ ಕೆಳಗೆ ನಮೂದಿಸಿರುವ ಶುಲ್ಕವನ್ನು ಕಡ್ಡಾಯವಾಗಿ ಪಾವತಿಸುವುದು.

| ಕ್ರ.ಸಂ | ಇತರೆ ಶುಲ್ಕಗಳ ವಿವರ | ಎಲ್ಲಾ ವಿದ್ಯಾರ್ಥಿಗಳಿಂದ ಕಡ್ಡಾಯವಾಗಿ ಪಾವತಿಸಿಕೊಳ್ಳಬೇಕಾದ ಇತರೆ ಶುಲ್ಕದ ಮೊತ್ತ (ರೂ.ಗಳಲ್ಲಿ) |
|---|---|---|
| 1. | ಅಂಕಪಟ್ಟಿ ಶುಲ್ಕ( ಪ್ರತಿ ಸೆಮಿಸ್ಟರ್‌ಗೆ) | 156-00 |
| 2. | ಆನ್‌ಲೈನ್ ಅರ್ಜಿ ಶುಲ್ಕ (ಪ್ರತಿ ವಿದ್ಯಾರ್ಥಿಗೆ) | 50-00 |
| 3. | ಅರ್ಜಿ ಪರಿಶೀಲನಾ ಶುಲ್ಕ (ಪ್ರತಿ ವಿದ್ಯಾರ್ಥಿಗೆ) | 30-00 |
| 4. | ಪರೀಕ್ಷಾ ಸಿದ್ಧತಾ ಶುಲ್ಕ (Process fee)( ಪ್ರತಿ ಸೆಮಿಸ್ಟರ್‌ಗೆ) | 60-00 |

*ಆನ್‌ಲೈನ್ ಅರ್ಜಿ ಶುಲ್ಕ ರೂ. 50-00 ಗಳಲ್ಲಿ ರೂ.05-00ಗಳನ್ನು ಕಾಲೇಜಿನವರು ಉಳಿಸಿಕೊಂಡು ಉಳಿದ ರೂ. 45-00 ಗಳನ್ನು ವಿಶ್ವವಿದ್ಯಾನಿಲಯದ ಖಾತೆಗೆ ಜಮಾ ಮಾಡುವುದು.

## ಶುಲ್ಕ ವಿನಾಯಿತಿ

1. ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ:

ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಎಲ್ಲಾ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನ ಮಿತಿ ರೂ.2.50 ಲಕ್ಷದೊಳಗಿದ್ದು, ಪುನರಾವರ್ತಿತ(Repeaters exam) ಪರೀಕ್ಷೆಗಳಿಗೆ ಶುಲ್ಕ ವಿನಾಯಿತಿ ಪಡೆಯಲು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳನ್ನು ಹೊರತುಪಡಿಸಿ ಉಳಿದ ವಿದ್ಯಾರ್ಥಿಗಳು ಅರ್ಹರಾಗಿರುವುದಿಲ್ಲ)

ಪರೀಕ್ಷಾ ಕೇಂದ್ರವನ್ನು ಮುಂದಿನ ದಿನಗಳಲ್ಲಿ ತಿಳಿಸಲಾಗುವುದು.

ವಿಭಾಗದ ಮುಖ್ಯಸ್ಥರು/ ಸಂಯೋಜಕರು ಅರ್ಹ ವಿದ್ಯಾರ್ಥಿಗಳಿಂದ ಎಸ್.ಬಿ.ಐ ಆನ್‌ಲೈನ್‌ನಲ್ಲಿ ಪರೀಕ್ಷಾ ಶುಲ್ಕವನ್ನು ಪಾವತಿಸುವುದು ಮತ್ತು ವಿದ್ಯಾರ್ಥಿಗಳಿಂದ ಶುಲ್ಕ ಪಾವತಿಸಿದ ರಶೀದಿಯನ್ನು ಪಡೆಯುವುದು.

ಅರ್ಹ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕವನ್ನು ವಿಶ್ವವಿದ್ಯಾನಿಲಯದ ಪರವಾಗಿ ಕಾಲೇಜಿನ ಪ್ರಾಂಶುಪಾಲರು ಸಂಗ್ರಹಿಸಿ, ನಂತರ ಒಟ್ಟು ಶುಲ್ಕವನ್ನು ಕ್ರೋಢೀಕರಿಸಿ ವಿಶ್ವವಿದ್ಯಾನಿಲಯದ ನಿಧಿಗೆ RTGS/NEFT ಮೂಲಕ ಎಸ್.ಬಿ.ಐ. ಖಾತೆ ಸಂ. 36954908103 ಗೆ ಪರೀಕ್ಷಾ ಶುಲ್ಕವನ್ನು ದಿನಾಂಕ 31.01.2020 ರೊಳಗೆ ಪಾವತಿಸಿ ಮತ್ತು ಪರೀಕ್ಷಾ ಶುಲ್ಕ ಪಾವತಿಸಿರುವ ವಿದ್ಯಾರ್ಥಿಗಳ ಪಟ್ಟಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ (ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳ ನಕಲು ಪ್ರತಿ) ಪ್ರಾಂಶುಪಾಲರು /ವಿಭಾಗದ ಮುಖ್ಯಸ್ಥರು/ ಸಂಯೋಜಕರು ದೃಢೀಕರಿಸಿ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವುದು. ಪರೀಕ್ಷಾ ಶುಲ್ಕದ ಹಣಕಾಸು ಪಟ್ಟಿಯನ್ನು ದ್ವಿಪ್ರತಿಗಳಲ್ಲಿ (ಪರೀಕ್ಷಾಂಗ ವಿಭಾಗಕ್ಕೆ ಒಂದು ಪ್ರತಿ ಮತ್ತು ಹಣಕಾಸು ವಿಭಾಗಕ್ಕೆ ಒಂದು ಪ್ರತಿಯನ್ನು ತಪ್ಪದೇ ಸಲ್ಲಿಸುವುದು).

ಸೂಚನೆ:-ವಿಷಯವಾರು ಕೋಡ್‌ಗಳನ್ನು ಪರಿಶೀಲಿಸಿ ಆನ್‌ಲೈನ್ ಮೂಲಕ ಪರೀಕ್ಷಾ ಅರ್ಜಿಯನ್ನು ಸಲ್ಲಿಸುವುದು. ಸಾಧ್ಯವಾಗದಿದ್ದಲ್ಲಿ ಈ ಕೆಳಕಂಡಂತೆ ಪರೀಕ್ಷಾ ಶುಲ್ಕದ ವಿವರವನ್ನು ಸಲ್ಲಿಸುವುದು.

| ಕ್ರ.ಸಂ. | ನೊಂದಣಿ ಸಂಖ್ಯೆ | ವಿದ್ಯಾರ್ಥಿಯ ಹೆಸರು | ಸೆಮಿಸ್ಟರ್ | ವಿಷಯ | ಶುಲ್ಕದ ವಿವರ |
|---|---|---|---|---|---|
| 1. | | | | | |

ಸೈದ್ಧಾಂತಿಕ (ಪಠ್ಯ ವಿಷಯ - Theory) ಪರೀಕ್ಷೆಗಳ ವಿವರಗಳನ್ನೊಳಗೊಂಡ ವೇಳಾಪಟ್ಟಿಯನ್ನು ಮುಂದೆ ತಿಳಿಸಲಾಗುವುದು.

(....3)

ಎಲ್ಲಾ ವಿಭಾಗದ ಮುಖ್ಯಸ್ಥರು/ ಸಂಯೋಜಕರು /ಪ್ರಾಂಶುಪಾಲರುಗಳು ಸಹಕರಿಸಬೇಕಾಗಿ ಕೋರಲಾಗಿದೆ.

ಆನ್‌ಲೈನ್‌ನಲ್ಲಿ ನಮೂದಿಸುವಾಗ ಏನಾದರೂ ಸಮಸ್ಯೆ ಉಂಟಾದಲ್ಲಿ ಹೆಚ್ಚಿನ ಮಾಹಿತಿಗಾಗಿ ಗಣಕಯಂತ್ರ ವಿಭಾಗದವರನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸುವುದು. (ಮೊಬೈಲ್ ಸಂಖ್ಯೆ: 8095371101)

ಆದೇಶದ ಮೇರೆಗೆ

ಉಪಕುಲಸಚಿವ(ಪರೀಕ್ಷಾಂಗ)

ಗೆ,

ನಿರ್ದೇಶಕರು / ಮುಖ್ಯಸ್ಥರು/ ಸಂಯೋಜಕರು/ ಪ್ರಾಂಶುಪಾಲರು/ ವಿವಿಧ ಸ್ನಾತಕೋತ್ತರ ವಿಭಾಗಗಳು ಮತ್ತು ವಿವಿಧ ಸ್ನಾತಕೋತ್ತರ ಸಂಯೋಜಿತ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಎಂ.ಎಸ್. ಬಿಲ್ಡಿಂಗ್-2, ಡಾ. ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು-560 001.
2. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
3. ಮಾನ್ಯ ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಉಪಕುಲಸಚಿವರು(ಶೈಕ್ಷಣಿಕ ವಿಭಾಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
7. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು - ವಿಶ್ವವಿದ್ಯಾನಿಲಯದ ಅಂತರ್ಜಾಲ (ವೆಬ್‌ಸೈಟ್) ದಲ್ಲಿ ಇಂದೇ ಪ್ರಕಟಿಸುವುದು.
8. ಫಲಿತಾಂಶ ಗಣಕೀಕರಣ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
9. ಕಛೇರಿ ಪ್ರತಿ.